# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಬಳ್ಳಾರಿ.
## ಅಧಿಸೂಚನೆ ಸಂಖ್ಯೆಃ09/2024
## ದಿನಾಂಕ ಃ 04ನೇ ಏಪ್ರೀಲ್-2024.

**ವಿಷಯಃ** ಬಳ್ಳಾರಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಬೆರಳಚ್ಚುಗಾರ ಮತ್ತು ಬೆರಳಚ್ಚು ನಕಲುಗಾರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖಃ-**
1) ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆಃ **DJA.II(LCA-II)-128/2012** ದಿನಾಂಕಃ-**11.09.2023.**
2) ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆಃ **DJA.II-34/2021** ದಿನಾಂಕಃ**-22.12.2023.**
2) Karnataka Sub-ordinate Courts (District Judiciary) (Ministerial and other posts) (Recruitment) (Amendment) Rules, 2021.
3) Karnataka Sub-ordinate Courts (Ministerial and other posts) (Recruitment) (Amendment) Rules, 2007.
4) Karnataka Civil Services (General Recruitment) Rules 1977.

**ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:06-05-2024**

ಮೇಲ್ಕಂಡ ಅಧಿಸೂಚನೆಯನ್ವಯ ಬಳ್ಳಾರಿ ಜಿಲ್ಲಾ ನ್ಯಾಯಾಂಗ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ **12** ಬೆರಳಚ್ಚುಗಾರ, **07** ಬೆರಳಚ್ಚು ನಕಲುಗಾರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ **(ON-LINE)** ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

1. ಅರ್ಜಿಗಳನ್ನು ಕಡ್ಡಾಯವಾಗಿ ಬಳ್ಳಾರಿ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://ballari.dcourts.gov.in/online-recruitment/** ನಲ್ಲಿ ನೀಡಲಾದ ಲಿಂಕ್ ಮೂಲಕ ದಿನಾಂಕಃ- **06.04.2024** ರಿಂದ ದಿನಾಂಕಃ- **06.05.2024**ರ ರಾತ್ರಿ **11.59** ರವರೆಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಮುಂದುವರೆದು ಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸಲು ಕಡೆಯ ದಿನಾಂಕಃ- **08.05.2024** ಆಗಿರುತ್ತದೆ.

2. ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆಯನ್ನು ಹಾಗೂ ಇ-ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು.

3. ಆನ್‌ಲೈನ್ ಹೊರತುಪಡಿಸಿ ಖುದ್ದಾಗಿ / ಅಂಚೆ ಮೂಲಕ / ಇನ್ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## ಬೆರಳಚ್ಚುಗಾರರು (Typists)

(1) ಹುದ್ದೆಗಳ ಸಂಖ್ಯೆ : **12**

(2) ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು.

(3) ಹುದ್ದೆಗಳ ವರ್ಗೀಕರಣ :

**ಹೈದರಾಬಾದ್- ಕರ್ನಾಟಕ ಸ್ಥಳೀಯ ವೃಂದದ ಹುದ್ದೆಗಳ ವರ್ಗೀಕರಣ**
**(Hyderabad Karnataka Local Cadre)**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಅಂಗವಿಕಲ ಅಭ್ಯರ್ಥಿ | ಇತರೆ | ಒಟ್ಟು |
|---|---|---|---|---|---|
| ಪರಿಶಿಷ್ಟ ಜಾತಿ | 01 | - | - | 01 | 02 |
| ಪರಿಶಿಷ್ಟ ಪಂಗಡ | - | - | - | 01 | 01 |
| ಪ್ರವರ್ಗ-1 | - | - | - | 01 | 01 |
| ಪ್ರವರ್ಗ-2(ಎ) | - | - | - | 01 | 01 |
| ಪ್ರವರ್ಗ-2(ಬಿ) | - | - | - | 01 | 01 |
| ಸಾಮಾನ್ಯ ಅಭ್ಯರ್ಥಿ | 02 | 02 | 01 | 01 | 06 |
| ಒಟ್ಟು | 03 | 02 | 01 | 06 | 12 |

**ವಿಶೇಷ ಸೂಚನೆ:- ಅಂಗವಿಕಲ ಅಭ್ಯರ್ಥಿಗಳಿಗೆ ಮೀಸಲಿರುವ ಹುದ್ದೆಗೆ ಅಂಧ/ದೃಷ್ಟಿ ಮಾಂದ್ಯ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಅರ್ಜಿಸಲ್ಲಿಸಬಹುದು.**

### ಶೈಕ್ಷಣಿಕ ವಿದ್ಯಾರ್ಹತೆ:

1. ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ 03 ವರ್ಷಗಳ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

2. ಸಾರ್ವಜನಿಕ ಶಿಕ್ಷಣ ಇಲಾಖೆ ನಡೆಸುವ ಕನ್ನಡ ಹಾಗೂ ಆಂಗ್ಲ ಹಿರಿಯ ಶ್ರೇಣಿ ಬೆರಳಚ್ಚು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

## ಬೆರಳಚ್ಚು ನಕಲುಗಾರರು (Typist-Copyists)

(1) ಹುದ್ದೆಗಳ ಸಂಖ್ಯೆ : **07**

(2) ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು.

(3) ಹುದ್ದೆಗಳ ವರ್ಗೀಕರಣ :

**ಹೈದರಾಬಾದ್- ಕರ್ನಾಟಕ ಸ್ಥಳೀಯ ವೃಂದದ ಹುದ್ದೆಗಳ ವರ್ಗೀಕರಣ**
**(Hyderabad Karnataka Local Cadre)**

**ಹಿಂಬಾಕಿ (ಬ್ಯಾಕ್‌ಲಾಗ್) ಹುದ್ದೆಗಳ ವರ್ಗೀಕರಣ:-**

| ವರ್ಗೀಕರಣ | ಅಂಗವಿಕಲ ಅಭ್ಯರ್ಥಿ |
|---|---|
| ಪರಿಶಿಷ್ಟ ಜಾತಿ | 01 |
| ಪ್ರವರ್ಗ-2(ಎ) | 01 |
| ಒಟ್ಟು | 02 |

**ವಿಶೇಷ ಸೂಚನೆ:-** ಅಂಗವಿಕಲ ಅಭ್ಯರ್ಥಿಗಳಿಗೆ ಮೀಸಲಿರುವ ಹುದ್ದೆಗೆ ಅಂಧ/ದೃಷ್ಟಿ ಮಾಂದ್ಯ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಅರ್ಜಿಸಲ್ಲಿಸಬಹುದು.

**ಹೊಸ ಹುದ್ದೆಗಳ ವರ್ಗೀಕರಣ:-**

| ವರ್ಗೀಕರಣ | ಮಹಿಳೆ | ಇತರೆ | ಒಟ್ಟು |
|---|---|---|---|
| ಪರಿಶಿಷ್ಟ ಜಾತಿ | | 01 | 01 |
| ಪರಿಶಿಷ್ಟ ಪಂಗಡ | - | 01 | 01 |
| ಪ್ರವರ್ಗ-1 | - | 01 | 01 |
| ಸಾಮಾನ್ಯ ಅಭ್ಯರ್ಥಿ | 01 | 01 | 02 |
| ಒಟ್ಟು | 01 | 04 | 05 |

**ಶೈಕ್ಷಣಿಕ ವಿದ್ಯಾರ್ಹತೆ:**

1. ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

2. ಸಾರ್ವಜನಿಕ ಶಿಕ್ಷಣ ಇಲಾಖೆ ನಡೆಸುವ ಕನ್ನಡ ಹಾಗೂ ಆಂಗ್ಲ ಕಿರಿಯ ಶ್ರೇಣಿ ಬೆರಳಚ್ಚು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

## <u>ಬೆರಳಚ್ಚುಗಾರ ಹಾಗೂ ಬೆರಳಚ್ಚುನಕಲುಗಾರ ಹುದ್ದೆಗಳ ಕೌಶಲ ಪರೀಕ್ಷೆ (Skill Test):-</u>

1. ಅಭ್ಯರ್ಥಿಗಳಿಗೆ 15 ನಿಮಿಷಗಳ ಅವಧಿಯಂತೆ ಕನ್ನಡ/ಇಂಗ್ಲೀಷ ಭಾಷೆಗಳಲ್ಲಿ ಬೆರಳಚ್ಚು ಮಾಡಲು ಉಕ್ತಲೇಖನ ನೀಡಲಾಗುವುದು. ಅದನ್ನು ಅಭ್ಯರ್ಥಿಗಳು ವಿಶೇಷ ತಂತ್ರಾಂಶದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡತಕ್ಕದ್ದು, ಬೆರಳಚ್ಚುಯಂತ್ರದ ಕೀಲಿಮಣೆಯನ್ನು ಹೋಲುವ ತಂತ್ರಾಂಶವನ್ನು ಗಣಕಯಂತ್ರಗಳಿಗೆ ಅಳವಡಿಸಲಾಗುವುದು.

2. ಕನ್ನಡ ಮತ್ತು ಆಂಗ್ಲ ಭಾಷಾ ಕೌಶಲ ಪರೀಕ್ಷೆಗಳಿಗೆ ತಲಾ ಗರಿಷ್ಠ 100 ಅಂಕಗಳನ್ನು ನಿಗದಿಪಡಿಸಲಾಗಿದ್ದು, ಉತ್ತೀರ್ಣರಾಗಲು ತಲಾ ಕನಿಷ್ಠ 50 ಅಂಕಗಳನ್ನು ಪಡೆಯಬೇಕಾಗಿರುತ್ತದೆ.

3. ನಿಗದಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಕೌಶಲ ಪರೀಕ್ಷೆಗಳಲ್ಲಿ ಪಡೆದ ಒಟ್ಟು ಅಂಕಗಳ ಶೇಕಡಾವಾರು ಮೊತ್ತದ ಆಧಾರದ ಮೇಲೆ ಮೀಸಲಾತಿಗನುಗುಣವಾಗಿ 01 ಹುದ್ದೆಗೆ 05 ಅಭ್ಯರ್ಥಿಗಳಂತೆ (1:5ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

4. ಸಂದರ್ಶನವು 05 ಅಂಕಗಳನ್ನು ಒಳಗೊಂಡಿರುತ್ತದೆ.

## <u>ವಯೋಮಿತಿ :</u>

i. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

a) ಕನಿಷ್ಟ-18ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು,

b) ಗರಿಷ್ಠ ವಯೋಮಿತಿ :

| | |
|---|---|
| ಸಾಮಾನ್ಯ ವರ್ಗ: | **35 ವರ್ಷಗಳು ಮೀರಿರಬಾರದು** |
| ಪ್ರವರ್ಗ 2ಎ, 2ಬಿ, 3ಎ, 3ಬಿ : | **38 ವರ್ಷಗಳು ಮೀರಿರಬಾರದು** |
| ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ : ಪ್ರವರ್ಗ-1 : | **40 ವರ್ಷಗಳು ಮೀರಿರಬಾರದು** |

ii. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

iii. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

iv. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

v. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ , ಅದರಲ್ಲಿ ಯಾವುದು ಕಡಿಮೆಯೇ ಅಷ್ಟು ವರ್ಷಗಳು.

vi. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

vii. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

## ಅರ್ಜಿ ಸಲ್ಲಿಸುವ ವಿಧಾನಃ

**ನಿಗದಿತ ಅರ್ಜಿ ಶುಲ್ಕ- ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ- 2ಎ, 2ಬಿ, 3ಎ, ಮತ್ತು 3ಬಿಗೆ ಸೇರಿದ ಅಭ್ಯರ್ಥಿಗಳು. | **ರೂ.250/-** |
| ಪರಿಶಿಷ್ಟ ಜಾತಿ ಃ ಪರಿಶಿಷ್ಟ ಪಂಗಡ , ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ. | **ರೂ.100/-** |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **http://ballari.dcourts.gov.in/notice-category/recruitments/** ಯ **Online Recruitment** ರಲ್ಲಿ ನೀಡಲಾದ ಲಿಂಕ್ ಮುಖಾಂತರ **Online Payment through Net – Banking / Credit – Card / Debit-Card / UPI** ಸೌಲಭ್ಯದ ಮೂಲಕ ಮಾತ್ರ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್ / ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು ಃ

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ ಎಸ್.ಎಂ.ಎಸ್ ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು, ಅಳತೆಯಲ್ಲಿ **5cm** ಉದ್ದ X **3.6 cm** ಅಗಲವುಳ್ಳದ್ದಾಗಿರಬೇಕು ಮತ್ತು **50**ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (**2.5cm** ಉದ್ದ **x 7.5cm** ಅಗಲವುಳ್ಳದ್ದಾಗಿರಬೇಕು ಮತ್ತು **26** ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು) ಅಪ್‌ಲೋಡ ಮಾಡಬೇಕು.

4. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

5. ತದನಂತರ ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **Download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಕೊಳ್ಳತಕ್ಕದ್ದು ಹಾಗೂ ನಿಗದಿಪಡಿಸಿದ ದಿನಾಂಕದಂದು ಹಾಜರು ಪಡಿಸಲು ಕೋರಿದಾಗ ಹಾಜರುಪಡಿಸತಕ್ಕದ್ದು.

6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸುವಂತೆ ತಿಳಿಸಿದೆ.

7. ನ್ಯಾಯಾಲಯದ ಅದಿಕೃತ ವೆಬ್‌ಸೈಟ್ **http://ballari.dcourts.gov.in/notice-category/recruitments/** ನಲ್ಲಿ **06.05.2024** ದಿನಾಂಕದ ರಾತ್ರಿ **11–59**ರವರೆಗೆ

ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಮತ್ತು ಅರ್ಜಿ ಶುಲ್ಕ ಪಾವತಿಸಲು ಕಡೆಯ ದಿನಾಂಕಃ- **08.05.2024** ರಾತ್ರಿ **11.59**ರವರೆಗೆ ಅವಕಾಶವಿರುತ್ತದೆ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

8. ಅರ್ಹ ಅಭ್ಯರ್ಥಿಗಳಿಗೆ **SMS** ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಕೌಶಲ ಪರೀಕ್ಷೆ / ಸಂದರ್ಶನಕ್ಕೆ ಅರ್ಹರಾಗುವ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಕೌಶಲ ಪರೀಕ್ಷೆ / ಸಂದರ್ಶನಕ್ಕೆ ಕರೆಯಲಾಗುವುದು.
9. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10. ಸೇವಾನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್‌ಲೈನ್‌ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರವು "ನಿರಾಕ್ಷೇಪಣಾ ಪ್ರಮಾಣಪತ್ರ" ವನ್ನು ನಿರಾಕರಿಸಿದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.

11. ಹೈದ್ರಾಬಾದ – ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ ಅರ್ಜಿ ಸಲ್ಲಿಸುವವರು ಸರಕಾರದ ಅದಿಸೂಚನೆ ಸಂಖ್ಯೆಃ **DPAR/43/HKC/2013** ಬೆಂಗಳೂರು ದಿನಾಂಕಃ**29-01-2014**ರಲ್ಲಿ ನಿಗದಿಪಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು-2013ರ ನಿಯಮ 3(3)ರಲ್ಲಿ ಗೊತ್ತುಪಡಿಸಿರುವಂತೆ "ಅನುಬಂಧ-ಎ" ಯಲ್ಲಿರುವಂತೆ "ಅರ್ಹತಾ ಪ್ರಮಾಣ ಪತ್ರ" ವನ್ನು ಸಂಬಂಧಪಟ್ಟ ಸಹಾಯಕ ಆಯುಕ್ತರವರಿಂದ ಹಾಗೂ ಸೇವಾನಿರತ ಅಭ್ಯರ್ಥಿಗಳು ಸ್ವಗ್ರಾಮ ಪ್ರಮಾಣವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅದಿಸೂಚನೆಯ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

12. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ , ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಪಡೆದ ಜಾತಿ ಪ್ರಮಾಣ ಪತ್ರ / ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.

13. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಃ ಸಿಆಸುಇ/115/ಸನೆನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. (ಕೇವಲ ಅಂಧ / ದೃಷ್ಟಿ ಮಾಂದ್ಯ ಅಂಗವೈಕಲ್ಯತೆ ಹೊಂದಿರುವ ಅಭ್ಯರ್ಥಿಗಳು ಮಾತ್ರ ಅಂಗವಿಕಲ ಮೀಸಲಾತಿ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ).

14. ಮಾಜಿ ಸೈನಿಕ ವಯೋಮಿತಿ ಸಡಿಲಿಕೆ ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ /ವಿಮುಕ್ತಿ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

15. ವಿಧವೆಯರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

16. ಮೇಲ್ಕಂಡ ಮೀಸಲಾತಿ/ರಿಯಾಯಿತಿಗಳನ್ನು ಕೋರುವ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.

17. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು ಹಾಗೂ ಗ್ರಾಮೀಣ ಅಭ್ಯರ್ಥಿಗಳು ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

18. ಅಭ್ಯರ್ಥಿಗಳು ತಮ್ಮ ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ ಸಿಜಿಪಿಎ ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗಧಿತ ಕಾಲಂನಲ್ಲಿ ನಮೂದಿಸಬೇಕು.

19. ಕೌಶಲ ಪರೀಕ್ಷೆ / ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ ಜನ್ಮ ಪ್ರಮಾಣ ಪತ್ರ / ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, (ಜನ್ಮ ದಿನಾಂಕವನ್ನು ದೃಢೀಕರಿಸಲು) ಜಾತಿ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ / ಗ್ರಾಮೀಣ ವಿದ್ಯಾರ್ಥಿ ಪ್ರಮಾಣ ಪತ್ರ / ಮಾಜಿ ಸೈನಿಕರು / ವಿಧವೆಯರು / ಅಂಗವಿಕಲರು ಇವರುಗಳಿಗೆ ಸಂಬಂಧಿಸಿದಂತೆ ಕೋರಿದ ಮೀಸಲಾತಿಗಳು / ವಯೋಮಿತಿ ಸಡಿಲಿಕೆ ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ ಆಗ ಅಂತಹ ಅರ್ಜಿಯನ್ನು ತಿರಸ್ಕರಿಸಬಹುದಲ್ಲದೇ ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಅಂತಹ ಅಭ್ಯರ್ಥಿಯನ್ನು ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಪಡಿಸಬೇಕಾಗಬಹುದು.

20. ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯ ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ, ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

21. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕಾನೂನು ಕ್ರಮ ಜರುಗಿಸಲಾಗುತ್ತದೆ.

22. ಅಭ್ಯರ್ಥಿಗಳ ಆಯ್ಕೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

23. ಪಿಂಚಣಿ ಸೌಲಭ್ಯ ಃ ಸರ್ಕಾರದ ಆದೇಶ ಸಂಖ್ಯೆ ಃ ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ ಃ 31.03.2006 ರಂತೆ.

24. ಅಭ್ಯರ್ಥಿಯು ನೇಮಕಾತಿ ಸಂಬಂಧ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

25. ಕೌಶಲ ಪರೀಕ್ಷೆ / ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಬಳ್ಳಾರಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

**sd/-**

**( ಎಸ್.ಹೆಚ್.ಪುಷ್ಪಾಂಜಲಿ ದೇವಿ )**
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಬಳ್ಳಾರಿ.**

**ಪ್ರತಿಯನ್ನು ಮಹಾ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಮಾಹಿತಿಗಾಗಿ ಸಲ್ಲಿಸಲಾಗಿದೆ.**

**<u>ಪ್ರತಿಯನ್ನು</u> ಃ-**
**(1) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು/ಬಳ್ಳಾರಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.**
**(2) ಉದ್ಯೋಗ ವಿನಿಮಯ ಕಛೇರಿ, ಬಳ್ಳಾರಿ.**
**(3) ಬಳ್ಳಾರಿ ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ (ಇ-ಮೇಲ್ ಮೂಲಕ) ತಮ್ಮ ನ್ಯಾಯಾಲಯದ ನೋಟೀಸ್ ಬೋರ್ಡ್‌ಗಳಲ್ಲಿ ಅಂಟಿಸಲು.**
**(4) ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಿಗೆ ಮಾಹಿತಿಗಾಗಿ, ವ್ಯಾಪಾಕ ಪ್ರಚಾರಕ್ಕಾಗಿ ಹಾಗೂ ತಮ್ಮ ನ್ಯಾಯಾಲಯದ ನೋಟೀಸ್ ಬೋರ್ಡ್‌ಗಳಲ್ಲಿ ಅಂಟಿಸವುದಾಕ್ಕಾಗಿ. (ಇ-ಮೇಲ್ ಮೂಲಕ).**
**(5) ಈ ಕಛೇರಿಯ ನೋಟೀಸ್ ಬೋರ್ಡ್‌ನಲ್ಲಿ ಅಂಟಿಸಲು.**

END